Total	5127

ವಿಷಯ : ವಿರಾಜಪೇಟೆ ತಾಲ್ಲೂಕಿನ ಜಿಲ್ಲಾ ಪರಿಷತ್ ರಸ್ತೆ ಲೋಕೋಪಯೋಗಿ ಇಲಾಖೆಗೆ ವಾಪಸ್.

Q : 696

ಶ್ರೀಮತಿ ಸುಮಾವಸಂತ (ವಿರಾಜಪೇಟೆ) : ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿರಾಜಪೇಟೆ ತಾಲ್ಲೂಕಿನ ಎಷ್ಟು ಕಿ.ಮಿ. ರಸ್ತೆಯನ್ನು ಜಿಲ್ಲಾ ಪರಿಷತ್ತಿನಿಂದ ಲೋಕೋಪಯೋಗಿ ಇಲಾಖೆ ವಾಪಸ್ಸು ಪಡೆದಿರುತ್ತದೆ.

ಆ) 1990-91, 1991-92, 1992-93ನೇ ಸಾಲುಗಳಲ್ಲಿ ಇದರ ದುರಸ್ತಿಗಾಗಿ ಸರ್ಕಾರವು ಎಷ್ಟು ಹಣ ಬಿಡುಗಡೆ ಮಾಡಿದೆ.

ಇ) ಮೂಡಿದ್ದಲ್ಲಿ, ದುರಸ್ತಿ ಕೆಲಸ ಯಾವ ಹಂತದಲ್ಲಿದೆ ಮತ್ತು ಯಾವಾಗ ಪೂರ್ಣಗೊಳ್ಳುವುದು?

ಶ್ರೀ ಕೆ. ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು) :

ಅ) ವಿರಾಜಪೇಟೆ ತಾಲ್ಲೂಕಿನಲ್ಲಿ ಒಟ್ಟು 126.10 ಕಿ. ಮೀ. ಉದ್ದದ ರಸ್ತೆಗಳನ್ನು ಮೇಲ್ದರ್ಜೆಗೇರಿಸಿ ಜಿಲ್ಲಾಪರಿಷತ್‌ನಿಂದ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಳ್ಳಲಾಗಿದೆ.

ಆ) 1990-91 ರಲ್ಲಿ ರೂ. 14.652 ಲಕ್ಷ
1991-92ರಲ್ಲಿ ರೂ. 10,647 ಲಕ್ಷ.
1992-93ರಲ್ಲಿ ರೂ.10.328 ಲಕ್ಷ.

ಇ) ಹೆಚ್ಚಿನ ಕಾಮಗಾರಿಗಳು ಈಗಾಗಲೇ ಪೂರ್ಣಗೊಂಡಿದ್ದು, ಉಳಿದಿರುವ ಕೆಲಸಗಳು 3:93ರಲ್ಲಿ ಪೂರ್ಣಗೊಳ್ಳಲಿದೆ.

ವಿಷಯ : ವಿರಾಜಪೇಟೆಯ ತಾಲ್ಲೂಕಿನ ರಸ್ತೆಗಳ ಅಭಿವೃದ್ಧಿಗೆ ಹಣ.

Q : 804

ಶ್ರೀಮತಿ ಸುಮಾವಸಂತ (ವೀರಾಜಪೇಟೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿರಾಜಪೇಟೆ ತಾಲ್ಲೂಕಿನಲ್ಲಿ ಪಿ.ಡಬ್ಲ್ಯು.ಡಿ ಮತ್ತು ಎಂ.ಆರ್.ಡಿ.ಗೆ ಸೇರಿದ ರಸ್ತೆಯ